**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ॥ ವೈ.ಎ.ನಾರಾಯಣಸ್ವಾಮಿ ಇವರು ನಿಯಮ 72ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

1143

| | |
|---|---|
| ವಿಷಯ: | ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ ಮತ್ತು ಅನುದಾನಿತ ಐ.ಟಿ.ಐ. ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗೆ ಪ್ರೌಢಶಾಲಾ ಶಿಕ್ಷಕರಿಗೆ ನೀಡುವಂತೆ ವೇತನ ಶ್ರೇಣಿ ನೀಡಲಾಗುತ್ತಿದ್ದು, ಈ ಸಂಸ್ಥೆಗಳಲ್ಲಿ ಬೋಧನೆ ಮಾಡುತ್ತಿರುವಂತಹ ಸಿಬ್ಬಂದಿಗಳಿಗೆ ಪದವಿಪೂರ್ವ ಉಪನ್ಯಾಸಕರ ತತ್ಸಮಾನ ವಿದ್ಯಾರ್ಹತೆ ಹೊಂದಿದ್ದು, ಸದರಿಯವರಿಗೆ ಪದವಿ ಪೂರ್ವ ಉಪನ್ಯಾಸಕರ ವೇತನ ಶ್ರೇಣಿಯನ್ನು ನೀಡುವುದು ಮತ್ತು ಕೇಂದ್ರ ಸರ್ಕಾರದ DGET (Director General Employment Training) ಮಾದರಿಯ ವೇತನ ಶ್ರೇಣಿ ನೀಡುವ ಕುರಿತಂತೆ ಚರ್ಚಿಸಲು ಮಾನ್ಯ ಉನ್ನತ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯಬಯಸುತ್ತೇನೆ. |

*******

ಕರ್ನಾಟಕ ಆರನೇ ರಾಜ್ಯ ವೇತನ ಆಯೋಗವು ರಾಜ್ಯದ ವಿವಿಧ ಇಲಾಖೆಗಳ ಬೇರೆ ಬೇರೆ ಹುದ್ದೆಗಳಿಗೆ ಜೀವನ ಮಟ್ಟದ ಮಾದರಿ ಪ್ರಮಾಣ ವೆಚ್ಚ, ರಾಜ್ಯದ ಆರ್ಥಿಕ ಪ್ರಗತಿ, ವಿವಿಧ ಸೇವೆ ಮತ್ತು ಪ್ರವರ್ಗಗಳ ವೇತನ ಶ್ರೇಣಿಗಳಲ್ಲಿ ಕಾಲಕಾಲಕ್ಕೆ ರೂಪುಗೊಂಡ ಸಾಪೇಕ್ಷತೆ ಹಾಗೂ ಇತರೆ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ವೇತನ ಶ್ರೇಣಿಗಳನ್ನು ಪರಿಷ್ಕರಿಸಲು / ಮೇಲ್ದರ್ಜೆಗೇರಿಸಲು ಶಿಫಾರಸ್ಸು ಮಾಡಿರುತ್ತದೆ.

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿನ ಬೋಧಕ ಹುದ್ದೆಗಳಾದ ಕಿರಿಯ ತರಬೇತಿ ಅಧಿಕಾರಿ ಮತ್ತು ತರಬೇತಿ ಅಧಿಕಾರಿ ಹುದ್ದೆಗಳನ್ನು ಒಳಗೊಂಡಂತೆ ಇತರ ಬೋಧಕೇತರ ಹುದ್ದೆಗಳಿಗೆ ವೇತನ ಶ್ರೇಣಿಯನ್ನು ಮೇಲ್ದರ್ಜೆಗೇರಿಸುವ ಕೋರಿಕೆಯನ್ನು ಆರನೇ ರಾಜ್ಯ ವೇತನ ಆಯೋಗವು ಕೂಲಂಕಷವಾಗಿ ಪರಿಶೀಲಿಸಿದ್ದು, ಕೋರಿಕೆಯನ್ನು ಒಪ್ಪಿರುವುದಿಲ್ಲ ಹಾಗೂ ವೇತನ ಶ್ರೇಣಿಯನ್ನು ಪರಿಷ್ಕರಿಸಲು / ಮೇಲ್ದರ್ಜೆಗೇರಿಸಲು ಶಿಫಾರಸ್ಸು ಮಾಡಿರುವುದಿಲ್ಲ.

ಡಿಜಿಟಿಯು (Directorate General of Training) ಕೇಂದ್ರ ಸರ್ಕಾರದ ಅಧೀನ ಇಲಾಖೆಯಾಗಿದ್ದು ಅದರಡಿ ಕಾರ್ಯನಿರ್ವಹಿಸುವ ಅಧಿಕಾರಿ / ಸಿಬ್ಬಂದಿಗಳಿಗೆ ಕೇಂದ್ರ ಸರ್ಕಾರವು ನಿಗಧಿಪಡಿಸುವ ವೇತನ ಶ್ರೇಣಿಯಲ್ಲಿ ವೇತನ ಪಾವತಿಸಲಾಗುತ್ತದೆ. ರಾಜ್ಯದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿನ ಕಿರಿಯ ತರಬೇತಿ ಅಧಿಕಾರಿ ಮತ್ತು ತರಬೇತಿ ಅಧಿಕಾರಿ ಹುದ್ದೆಗಳು ರಾಜ್ಯ ಸರ್ಕಾರದ ಅಧೀನದ ಹುದ್ದೆಗಳಾಗಿದ್ದು, ಇವುಗಳಿಗೆ ಕೇಂದ್ರ ಸರ್ಕಾರದ ನಿಯಮಗಳು ಮತ್ತು ಕೇಂದ್ರ ವೇತನ ಆಯೋಗದ ಶಿಫಾರಸ್ಸುಗಳು ಅನ್ವಯಿಸದಿರುವುದರಿಂದ ಕೇಂದ್ರ ಸರ್ಕಾರದ ಹುದ್ದೆಗಳಿಗೆ ನಿಗದಿಪಡಿಸಿರುವ ವೇತನ ಶ್ರೇಣಿ ಮತ್ತು ಭತ್ಯೆಗಳನ್ನು ರಾಜ್ಯ ಸರ್ಕಾರದ ಹುದ್ದೆಗಳಿಗೆ ಅನ್ವಯಿಸಿ ಹೋಲಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆದ್ದರಿಂದ ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ವೇತನವನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಸಮನಾಗಿ ಅಥವಾ ಡಿಜಿಟಿಯ ಅಧೀನದ ಸಿಬ್ಬಂದಿಗಳಿಗೆ ನೀಡುವ ವೇತನಕ್ಕೆ ಸಮನಾಗಿ ನೀಡಲು ಅವಕಾಶವಿರುವುದಿಲ್ಲ.

* * * *

**ಕೌಉಜೀಇ 43 ಕೈತಪ್ರ 2022**

(ಡಾ.ಸಿ.ಎನ್.ಅಶ್ವತ್ಥ ನಾರಾಯಣ)
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು